# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 1676
**ಮಾನ್ಯ ಸದಸ್ಯರ ಹೆಸರು** : ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ)
**ಉತ್ತರಿಸಬೇಕಾದ ದಿನಾಂಕ** : 14-03-2022
**ಉತ್ತರಿಸುವ ಸಚಿವರು** : ಪ್ರವಾಸೋದ್ಯಮ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಕಲಬುರಗಿ ಜಿಲ್ಲೆಯ ಕೇಂದ್ರದಲ್ಲಿ ಕಿ.ಶ.14ನೇ ಶತಮಾನದಲ್ಲಿ ಬಹಮನಿ ಸಾಮ್ರಾಜ್ಯದಿಂದ ನಿರ್ಮಿಸಲಾದ ಐತಿಹಾಸಿಕ ಬೃಹತ್ ಕೋಟೆಯು ಪಾಳುಬಿದ್ದು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿದೆ.<br><br>ಈ ಕೋಟೆ ಪ್ರದೇಶವು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ, ಹಂಪಿ ವಲಯ ವ್ಯಾಪ್ತಿಗೆ ಒಳಪಡುತ್ತದೆ. |
| ಆ) | ಈ ಬೃಹತ್ ಕೋಟೆಯ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಪ್ರಸ್ತುತ ಯಾವ ಹಂತದಲ್ಲಿದೆ; (ವಿವರ ನೀಡುವುದು) | ಕಲಬುರಗಿ ನಗರದ ಕೋಟೆ ಪ್ರದೇಶದಲ್ಲಿ ಪಾತ್‌ವೇ, ಲ್ಯಾಂಡ್ ಸ್ಕೇಪಿಂಗ್, ಸೈನೇಜಸ್, ಫೆನ್ಸಿಂಗ್, ಗಿಡಘಂಟೆ ತೆಗೆಯುವುದು, ಕುಡಿಯುವ ನೀರಿನ ಸೌಲಭ್ಯ, ಶೌಚಾಲಯದ ಉನ್ನತೀಕರಣ ಕಾಮಗಾರಿಯನ್ನು ರೂ.150.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಿರುವುದನ್ನು ಮಾರ್ಪಡಿಸಿ, ರೂ.174.64 ಲಕ್ಷಗಳಿಗೆ ಅನುಮೋದನೆ ನೀಡಲಾಗಿದೆ. ಅದರಂತೆ, ಸದರಿ ಕಾಮಗಾರಿಗಳನ್ನು ರೂ.174.64 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಅಧೀಕ್ಷಕ ಪುರಾತತ್ವಜ್ಞರು, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ, ಧಾರವಾಡ ಇವರಿಗೆ ದಿನಾಂಕ: 15.08.2017ರಂದು ಆಡಳಿತಾತ್ಮಕ ಅನುಮೋದನೆ ನೀಡಿ, ರೂ.100.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ ಹಾಗೂ ಎರಡನೇ ಕಂತಾಗಿ ರೂ.42.37 ಲಕ್ಷಗಳನ್ನು ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ಕಲಬುರಗಿ ಇವರಿಗೆ ದಿನಾಂಕ: 16.01.2017ರಂದು ಬಿಡುಗಡೆ ಮಾಡಲಾಗಿದೆ. |
| ಇ) | ಬೀದರ್‌ನಲ್ಲಿ ಇರುವ ಬಹಮನಿ ಕೋಟೆಯಂತೆಯೇ ಕಲಬುರಗಿಯಲ್ಲಿರುವ ಕೋಟೆಯನ್ನು ಕಾಪಾಡಲು ಮತ್ತು ಪುನರುದ್ಧಾರಗೊಳಿಸಲು ಸರ್ಕಾರಕ್ಕೆ ಇರುವ ಅಡೆತಡೆಗಳಾವುವು; | |
| ಈ) | ಇಲ್ಲಿಯವರೆಗೆ ಈ ಕೋಟೆಯ ಪುನರ್ ನಿರ್ಮಾಣ ಕಾಮಗಾರಿಗೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು? (ಕಾಮಗಾರಿಯ ಪೂರ್ತಿ ವಿವರವನ್ನು ನೀಡುವುದು) | ಸದರಿ ಕಾಮಗಾರಿಗೆ ಮೂರು ಬಾರಿ ಟೆಂಡರ್ ಕರೆಯಲಾಗಿದ್ದು, ಯಾವುದೇ ಬಿಡ್ಡುದಾರರು ಭಾಗವಹಿಸಿರುವುದಿಲ್ಲ. ಪ್ರಸ್ತುತ ಫೆನ್ಸಿಂಗ್ ಮತ್ತು ಉದ್ಯಾನವನ ಅಭಿವೃದ್ಧಿಗಾಗಿ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ, ಹಂಪಿ ವಲಯ ರವರು ಟೆಂಡರ್ ಕರೆದಿದ್ದು, ಸದರಿ ಟೆಂಡರ್‌ನ ತಾಂತ್ರಿಕ ಪರಿಶೀಲನೆ ಪ್ರಗತಿಯಲ್ಲಿರುತ್ತದೆ. |

TOR 109 TDV 2022

(ಆನಂದ್ ಸಿಂಗ್)
ಪ್ರವಾಸೋದ್ಯಮ,
ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು